1/231347/2022

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶಿವಮೊಗ್ಗ ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆಯ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಮೂಅಇ 60 ರಾಅವಿ 2018, ದಿನಾಂಕ 21.08.2019.
2. ಸರ್ಕಾರದ ಆದೇಶ ಸಂಖ್ಯೆ:ಮೂಅಇ 60 ರಾಅವಿ 2018, ದಿನಾಂಕ:21.08.2019.
3. ಸರ್ಕಾರದ ಆದೇಶ ಸಂಖ್ಯೆ:ಮೂಅಇ 60 ರಾಅವಿ 2018, ದಿನಾಂಕ:02.12.2019.
4. ಸರ್ಕಾರದ ಆದೇಶ ಸಂಖ್ಯೆ:ಮೂಅಇ 60 ರಾಅವಿ 2018, ದಿನಾಂಕ:03.01.2020.
5. ಸರ್ಕಾರದ ಆದೇಶ ಸಂಖ್ಯೆ:ಮೂಅಇ 60 ರಾಅವಿ 2018, ದಿನಾಂಕ:10.01.2020.
6. ಸರ್ಕಾರದ ಆದೇಶ ಸಂಖ್ಯೆ:ಮೂಅಇ 60 ರಾಅವಿ 2018, ದಿನಾಂಕ:06.02.2020.
7. ಸರ್ಕಾರದ ಆದೇಶ ಸಂಖ್ಯೆ:ಮೂಅಇ 60 ರಾಅವಿ 2018, ದಿನಾಂಕ:05.12.2020.
8. ಸರ್ಕಾರದ ಆದೇಶ ಸಂಖ್ಯೆ:ಮೂಅಇ 133 ರಾಅವಿ 2020, ದಿನಾಂಕ:12.02.2021.
9. ಸರ್ಕಾರದ ಆದೇಶ ಸಂಖ್ಯೆ:ಮೂಅಇ 60 ರಾಅವಿ 2018, ದಿನಾಂಕ:11.06.2021
10. ಸರ್ಕಾರದ ಆದೇಶ ಸಂಖ್ಯೆ:ಮೂಅಇ 152 ರಾಅವಿ 2020, ದಿನಾಂಕ:07.01.2022
11. ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ಐಐಡಿಸಿ, ಇವರ ಪತ್ರ ಸಂಖ್ಯೆ:ಕಾನಿ/ಐಪಿಡಿ/376/1789/2021-22, ದಿನಾಂಕ:09.02.2022.
12. ಸರ್ಕಾರದ ಆದೇಶ ಸಂಖ್ಯೆ: ಐಡಿಡಿ 22 ಯುಐಪಿ 2020, ದಿನಾಂಕ: 15.04.2021
13. ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ; ಆಇ 1 ವೆಚ್ಚ-1/2021, ದಿನಾಂಕ: 07.03.2022

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಶಿವಮೊಗ್ಗ ಕಿರು ವಿಮಾನ ಇಳಿದಾಣವನ್ನು ಕೆ.ಎಸ್.ಐ.ಐ.ಡಿ.ಸಿ ಸಂಸ್ಥೆಯ ಮೂಲಕ ರೂ.38.00 ಕೋಟಿಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿ ಪಡಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ,



10/03/2022
Sr. pragmr

ಶಿವಮೊಗ್ಗ ಇವರಿಗೆ ಪ್ರಾರಂಭಿಕವಾಗಿ ರೂ.2.00 ಕೋಟಿ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ:(3) ರ ಆದೇಶದಲ್ಲಿ ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:14.12.2019ರಂದು ನಡೆದ ಸಭೆಯ ನಡವಳಿಯ ಅನುಸಾರ ಶಿವಮೊಗ್ಗ ವಿಮಾನ ನಿಲ್ದಾಣ ಕಾಮಗಾರಿಯನ್ನು ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರ ನೇತೃತ್ವದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸಲು ನಿರ್ಣಯಿಸಿದಂತೆ ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರಿಗೆ ರೂ.4.00 ಕೋಟಿ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಆದೇಶದಲ್ಲಿ ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕು, ಸೋಗಾನೆ ಗ್ರಾಮದ ಪರಿಮಿತಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣದ ಆವರಣದಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿಗೆ ಲೋಕೋಪಯೋಗಿ ಇಲಾಖೆಯು ಸಲ್ಲಿಸಿರುವ ಅಂದಾಜು ಪಟ್ಟಿಯ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅದರಂತೆ, ಮೇಲೆ ಓದಲಾದ ಕ್ರಮ ಸಂಖ್ಯೆ:(5) ರ ಆದೇಶದಲ್ಲಿ ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕು, ಸೋಗಾನೆ ಗ್ರಾಮದ ಪರಿಮಿತಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣದ ಆವರಣದಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿಗೆ ರೂ.19.57 ಕೋಟಿಗಳನ್ನು ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರಿಗೆ ಬಿಡುಗಡೆಗೊಳಿಸಲಾಗಿದೆ.

4. ಮೇಲೆ ಓದಲಾದ ಕ್ರಮ ಸಂಖ್ಯೆ:(6)ರ ಆದೇಶದಲ್ಲಿ ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕು, ಸೋಗಾನೆ ಗ್ರಾಮದ ಪರಿಮಿತಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣದ ಅಭಿವೃದ್ಧಿ ಪಡಿಸಲು ರೂ.220 ಕೋಟಿಗಳ ಅನುದಾನವನ್ನು ಒದಗಿಸಲು ಸರ್ಕಾರದ ಅನುಮೋದನೆಯನ್ನು ನೀಡಲಾಗಿರುತ್ತದೆ.

5. ಮೇಲೆ ಓದಲಾದ ಕ್ರಮ ಸಂಖ್ಯೆ (7)ರ ಆದೇಶದಲ್ಲಿ ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕು ಸೋಗಾನೆ ಗ್ರಾಮದ ವಿಮಾನ ನಿಲ್ದಾಣದ ಅಭಿವೃದ್ಧಿಯನ್ನು ಎಟಿಆರ್ -72 (Day Visual Flight Range (VFR) Operations) ಮಾದರಿ ವಿಮಾನ ಕಾರ್ಯಚರಣೆಯಿಂದ ಏರ್ ಬಸ್ - 320 ಮಾದರಿಯ ವಿಮಾನ ಕಾರ್ಯಚರಣೆಗೆ ಅನುವಾಗುವಂತೆ ಉನ್ನತಿಕರಿಸಿ ಅಭಿವೃದ್ಧಿ ಪಡಿಸಲು ಪರಿಷ್ಕೃತ ಅಂದಾಜು ವೆಚ್ಚ ರೂ.220.00 ಕೋಟಿಯಿಂದ ರೂ.384.00 ಕೋಟಿಗಳಿಗೆ ಹೆಚ್ಚಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

6. ಮೇಲೆ ಓದಲಾದ ಕ್ರಮ ಸಂಖ್ಯೆ (8)ರ ಪತ್ರದಲ್ಲಿ ಶಿವಮೊಗ್ಗ ವಿಮಾನ ನಿಲ್ದಾಣ ಅಭಿವೃದ್ದಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ರೂ.40.00 ಕೋಟಿಗಳ ಅನುದಾನವನ್ನು ವ್ಯವಸ್ಥಾಪಕ ನಿರ್ದೇಶಕರು ಕೆಎಸ್ಐಐಡಿಸಿ ಸಂಸ್ಥೆಯ ಮೂಲಕ ಜಿಲ್ಲಾಧಿಕಾರಿಗಳು ಶಿವಮೊಗ್ಗ ಜಿಲ್ಲೆ ಶಿವಮೊಗ್ಗ ಇವರಿಗೆ ಬಿಡುಗಡೆ ಮಾಡಲು ಅನುಮೋದನೆಯನ್ನು ನೀಡಲಾಗಿದೆ.

7. ಮೇಲೆ ಓದಲಾದ ಕ್ರಮ ಸಂಖ್ಯೆ (9)ರ ಆದೇಶದಲ್ಲಿ ಶಿವಮೊಗ್ಗ ವಿಮಾನ ನಿಲ್ದಾಣ ಯೋಜನೆಗಾಗಿ ಶಿವಮೊಗ್ಗ ಜಿಲ್ಲೆ ಮತ್ತು ತಾಲ್ಲೂಕು, ಸೋಗಾನೆ ಗ್ರಾಮದಲ್ಲಿ ಸ್ವಾಧೀನಪಡಿಸಿಕೊಂಡಿರುವ 104 ಎ – 35 ಗುಂಟೆ ಜಮೀನಿನ ಪೈಕಿ, 26-34 ಎಕರೆ ಹಿಡುವಳಿ ಜಮೀನಿಗೆ ಪರಿಷ್ಕೃತ ಧರ ರೂ 8.06 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

8. ಮೇಲೆ ಓದಲಾದ ಕ್ರಮ ಸಂಖ್ಯೆ (10)ರ ಆದೇಶದಲ್ಲಿ ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕು, ಸೋಗಾನೆ ಗ್ರಾಮದ ಪರಿಮಿತಿಯಲ್ಲಿ ಶಿವಮೊಗ್ಗ ವಿಮಾನ ನಿಲ್ದಾಣದ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ರೂ.40.00 ಕೋಟಿಗಳ ಅನುದಾವನ್ನು ಬಿಡುಗಡೆ ಮಾಡಲಾಗಿದೆ.

9. ಮೇಲೆ ಓದಲಾದ ಕ್ರಮ ಸಂಖ್ಯೆ (11)ರ ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ ಐಐಡಿಸಿ ನಿಗಮ ಇವರ ಪತ್ರದಲ್ಲಿ ಕಾರ್ಯಪಾಲಕ ಅಭಿಯಂತರು, ಲೋಕೋಪಯೋಗಿ ಇಲಾಖೆ ವಿಶೇಷ ಶಿವಮೊಗ್ಗ, ಇವರ ಪತ್ರದಲ್ಲಿ ಶಿವಮೊಗ್ಗ ವಿಮಾನ ನಿಲ್ದಾಣದ ಕಾಮಗಾರಿಗೆ ಸಂಬಂಧಿಸಿದಂತೆ ರೂ.157.92 ಕೋಟಿ ಬಿಡುಗಡೆಯಾಗಿದ್ದು, ಈವರೆಗೆ ರೂ.157.92 ಕೋಟಿ ವೆಚ್ಚ ಮಾಡಲಾಗಿರುತ್ತದೆಂದು ತಿಳಿಸುತ್ತಾ, ಅಂದಾಜಿಸಿದಂತೆ ( As Pre Milestone ending April-2022) ರೂ.120.00 ಕೋಟಿಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ ಪ್ಯಾಕೇಜ್ 1 ಮತ್ತು ಪ್ಯಾಕೇಜ್ -2 ಕಾಮಗಾರಿಗಳು ತ್ವರಿತಗತಿಯಲ್ಲಿ ಸಾಗುತ್ತಿದ್ದು, ಶಿವಮೊಗ್ಗ ವಿಮಾನ ನಿಲ್ದಾಣದ ಅಭಿವೃದ್ಧಿಗೆ ಅವಶ್ಯವಿರುವ ರೂ.120.00 ಕೋಟಿ ಮೊತ್ತವನ್ನು ಬಿಡುಗಡೆಗೊಳಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ಐಐಡಿಸಿ ಇವರು ಕೋರಿರುತ್ತಾರೆ.

10. ಮೇಲೆ ಓದಲಾದ ಕ್ರಮ ಸಂಖ್ಯೆ (12)ರ ಆದೇಶದಲ್ಲಿ 2021-22ನೇ ಆರ್ಥಿಕ ಸಾಲಿಗೆ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಮುಂದುವರೆದ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುಮೋದನೆಯನ್ನು

ನೀಡಿ ಆದೇಶಿಸಲಾಗಿದೆ. ಇದರಲ್ಲಿ ಲೆಕ್ಕ ಶೀರ್ಷಿಕೆ 5465-01-190-1-05-132- ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ – ಬಂಡವಾಳ ವೆಚ್ಚಗಳು ಅಡಿ 25000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

11. ಮೇಲೆ ಓದಲಾದ ಕ್ರಮ ಸಂಖ್ಯೆ (13)ರ ಆರ್ಥಿಕ ಇಲಾಖೆಯ ಸಹಮತಿಯಯ ಮೇರೆಗೆ ಈ ಕಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮೂಅಇ 152 ರಾಅವಿ 2020**

**ಬೆಂಗಳೂರು ದಿನಾಂಕ: 10ನೇ ಮಾರ್ಚ್ 2022**

ಪ್ರಸ್ತಾವನೆಯನ್ನು ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ತಾಲ್ಲೂಕು, ಸೋಗಾನೆ ಗ್ರಾಮದ ಪರಿಮಿತಿಯಲ್ಲಿ ಶಿವಮೊಗ್ಗ ವಿಮಾನ ನಿಲ್ದಾಣದ ಅಭಿವೃದ್ಧಿ ಪ್ಯಾಕೇಜ್-1 ಮತ್ತು ಪ್ಯಾಕೇಜ್-2ರ ಕಾಮಗಾರಿಗಳಿಗೆ ರೂ.23.00 ಕೋಟಿಗಳ ( ರೂಪಾಯಿ ಇಪ್ಪತ್ತ ಮೂರು ಕೋಟಿ ರೂಪಾಯಿಗಳು ಮಾತ್ರ ) ಅನುದಾವನ್ನು ವ್ಯವಸ್ಥಾಪಕ ನಿರ್ದೇಶಕರು ಕೆ.ಎಸ್.ಐ.ಐ.ಡಿ.ಸಿ ನಿಯಮಿತದ ಮುಖಾಂತರ ಕಾರ್ಯನಿರ್ವಹಕ ಅಭಿಯತರರು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

**2. ಷರತ್ತುಗಳು**

- ಈಗ ಬಿಡುಗಡೆ ಆಡಿರುವ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಕೆ ಮಾಡತಕ್ಕದ್ದು, ಹಾಗೂ ಇದೇ ಉದ್ದೇಶಕ್ಕೆ ಈಗಾಗಲೇ ವೆಚ್ಚ ಮಾಡಿದ್ದಲ್ಲಿ ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಬಳಕೆ ಮಾಡುವಂತಿಲ್ಲ.
- ಬಿಡುಗಡೆ ಮಾಡಿರುವ ಅನುದಾನವನ್ನು ಶಿಮಮೊಗ್ಗ ವಿಮಾನ ನಿಲ್ದಾಣದ ಪ್ಯಾಕೇಜ್ – 1 ಮತ್ತು ಪ್ಯಾಕೇಜ್-2 ಕಾಮಗಾರಿಗಳಿಗೆ ಮಾತ್ರ ಬಳಕೆ ಮಾಡತಕ್ಕದ್ದು.
- ಅನುದಾನ ಬಳಕೆ ಬಗ್ಗೆ ನಿಗಧಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

3. ಈ ಯೋಜನೆಗಾಗಿ 2021-22ನೇ ಸಾಲಿನ ಲೆಕ್ಕ ಶಿರ್ಷಿಕೆ 5465-01-190-1-05-132 - ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ - ಬಂಡವಾಳ ವೆಚ್ಚಗಳು ರಡಿ ಒದಗಿಸಲಾಗಿರುವ ಅನುದಾನದಿಂದ ಭರಿಸತಕ್ಕದ್ದು.

4. ಈ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ., ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-1 ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇಲ್ಲಿ ತೆಗೆಯಲು ಅನುಮತಿಸಿದೆ.

4. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 1 ವೆಚ್ಚ-1/2021, ದಿನಾಂಕ:07.03.2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಎನ್. ಕಲಾವತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು
ಮತ್ತು ಒಳನಾಡು ಜಲಸಾರಿಗೆ ಇಲಾಖೆ,

**ಗೆ:**

1. ಮಹಾಲೇಖಪಾಲರು,(ಜಿ&ಎಸ್,ಎಸ್,ಎ) (ಇ& ಆರ್,ಎಸ್,ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು -560 001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
4. ಆಯುಕ್ತರು, ಟಿ.ಎನ್.ಎಂ.ಸಿ, ಖನಿಜಭವನ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಶಿವಮೊಗ್ಗ.
6. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು
8. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.

9. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ ಕಾರ್ಯಕ್ರಮ, ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1,) ವಿಧಾನ ಸೌಧ, ಬೆಂಗಳೂರು.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ, ವೆಬ್ ಸೈಟ್ ನಲ್ಲಿ ಪ್ರಕಟಿಸಲು.
4. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.